## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ: ಕೇಂದ್ರ ಕಛೇರಿ : ಬೆಂಗಳೂರು-27

ಸಂ:ಕರಾಸಾ:ಕೇಕ:ಸಂ:ವಾ:ಸಿ2: 2579:2022-23 ದಿನಾಂಕ: 21-03-2023

**ಸುತ್ತೋಲೆ**

ವಿಷಯ: ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ವಾಹನಗಳಲ್ಲಿ ಪ್ರಯಾಣಿಸಲು ಅನುಮತಿಸುವ ಬಗ್ಗೆ.

ಉಲ್ಲೇಖ: 1. ಅ.ಸ.ಪ ಸಂಖ್ಯೆ: ಎ8/ಪ.ವಿ.ಬ.ಪಾ.ವಿ/ಇ12231/2022-23 ದಿನಾಂಕ: 15.03.2023.
2. ಸೂಕ್ತಾಧಿಕಾರಿಗಳ ಅನುಮೋದನೆ ದಿನಾಂಕ: 20.03.2023.

****

2022-23ನೇ ಸಾಲಿನ ಕರ್ನಾಟಕದ ಎಸ್‌ಎಸ್‌ಎಲ್‌ಸಿ ಅಂತಿಮ ಪರೀಕ್ಷೆಗಳನ್ನು ಸರ್ಕಾರದ ಆದೇಶದಂತೆ ದಿನಾಂಕ 31-03-2023 ರಿಂದ 15-04-2023 ರವರೆಗೆ ನಡೆಸಲು ತೀರ್ಮಾನಿಸಿದ್ದು, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸುವಂತೆ ಉಲ್ಲೇಖ-1 ರಲ್ಲಿ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳ ರವರು ಕೋರಿರುತ್ತಾರೆ.

ರಾಜ್ಯದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ, 2022-23ನೇ ಸಾಲಿನಲ್ಲಿ ಪರೀಕ್ಷೆ ನಡೆಯುವ ದಿನಾಂಕಗಳಲ್ಲಿ ಅಂದರೆ ದಿನಾಂಕ: 31-03-2023 ರಿಂದ 15-04-2023 ರವರೆಗೆ ಪರೀಕ್ಷಾ ದಿನಗಳಂದು ವಿದ್ಯಾರ್ಥಿಗಳು "ಎಸ್‌ಎಸ್‌ಎಲ್‌ಸಿ ಪರೀಕ್ಷಾ ಪ್ರವೇಶ ಪತ್ರವನ್ನು" ತೋರಿಸಿ, ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ತೆರಳಲು ಮತ್ತು ವಾಪಸ್ ಮರಳಲು ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸಲು ತೀರ್ಮಾನಿಸಲಾಗಿದೆ.

ಅದರನ್ವಯ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಅವಧಿಯಲ್ಲಿ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಹಾಗೂ ವಾಸಸ್ಥಳಕ್ಕೆ ಮರಳಲು ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಉಚಿತ ಪ್ರಯಾಣವನ್ನು ಅನುಮತಿಸಲು ನಿಗಮದ ಎಲ್ಲಾ ಚಾಲಕ / ನಿರ್ವಾಹಕರುಗಳಿಗೆ ಸೂಕ್ತ ತಿಳುವಳಿಕೆ ನೀಡಲು ಸೂಚಿಸಲಾಗಿದೆ. ಜೊತೆಗೆ, ಪ್ರವೇಶ ಪತ್ರದ ಆಧಾರದ ಮೇಲೆ ಬಸ್ಸು ಆಚರಣೆ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳು ಬಸ್ಸನ್ನು ಹತ್ತುವವರಿದ್ದಲ್ಲಿ ಹಾಗೂ ಆಚರಣಾ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿದ್ದಲ್ಲಿ, ವಿದ್ಯಾರ್ಥಿಗಳು ಬಸ್ಸನ್ನು ಹತ್ತಲು / ಇಳಿಯಲು ಅನುಕೂಲವಾಗುವಂತೆ ಕೋರಿಕೆ ನಿಲುಗಡೆ ನೀಡಲು ಚಾಲನಾ ಸಿಬ್ಬಂದಿಗಳಿಗೆ ತಿಳುವಳಿಕೆ ನೀಡುವುದು.

ಚಾಲನಾ ಸಿಬ್ಬಂದಿಗಳು ಮೇಲ್ಕಂಡ ನಿರ್ದೇಶನಗಳನ್ನು ತಪ್ಪದೇ ಪಾಲಿಸುವುದು ಹಾಗೂ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಅನುಕೂಲಕರವಾಗುವಂತೆ ಕಾರ್ಯ ನಿರ್ವಹಿಸುವುದು.

ಈ ಸುತ್ತೋಲೆಯನ್ನು ಎಲ್ಲಾ ಘಟಕಗಳ ಹಾಗೂ ಬಸ್ ನಿಲ್ದಾಣಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಿ ಮೇಲ್ಕಂಡ ನಿರ್ದೇಶನಗಳನ್ನು ಜಾರಿಗೊಳಿಸಲು ಕ್ರಮ ವಹಿಸುವುದು.

21/3

ನಿರ್ದೇಶಕರು (ಸಿ ಮತ್ತು ಜಾ)
ಕರಾರಸಾ ನಿಗಮ.

**ಪ್ರತಿಯನ್ನು ಗೌರವಪೂರ್ವಕವಾಗಿ:**

- ✓ ಮಾನ್ಯ ಅಧ್ಯಕ್ಷರು, / ಮಾನ್ಯ ಉಪಾಧ್ಯಕ್ಷರು, ಕರಾರಸಾ ನಿಗಮ, ರವರ ಆಪ್ತ ಕಾರ್ಯದರ್ಶಿಗಳು, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ / ವಾಕರಸಾಸಂಸ್ಥೆ / ಕಕರಸಾನಿಗಮ ಬೆಂಗಳೂರು / ಹುಬ್ಬಳ್ಳಿ / ಕಲಬುರ್ಗಿ ರವರ ಹಿರಿಯ ಆಪ್ತ ಕಾರ್ಯದರ್ಶಿಗಳು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು 560003 ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಸಿ&ಜಾ) ಕ.ರಾ.ರ.ಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ), ಬೆಂಮಸಾಸಂಸ್ಥೆ ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಮುಖ್ಯ ಸಂಚಾರ ವ್ಯವಸ್ಥಾಪಕರು, ವಾಕರಸಾ ಸಂಸ್ಥೆ / ಕಕರಸಾ ನಿಗಮ, ಕೇಂದ್ರ ಕಛೇರಿ, ಹುಬ್ಬಳ್ಳಿ / ಕಲಬುರ್ಗಿ ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಎಲ್ಲಾ ಹಿರಿಯ / ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕರಾರಸಾ ನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.